**ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ಸಿ.ಸಿ.ನಂ.1022/2018**

**ಸಿ.ಡಬ್ಲ್ಯೂ-11**

**ಪಿ.ಡಬ್ಲ್ಯೂ-04**

| | |
|---|---|
| ಸಾಕ್ಷಿಯ ಹೆಸರು | : ಯಲ್ಲಪ್ಪ ನಡಟ್ಟಿ |
| ತಂದೆ/ಗಂಡನ ಹೆಸರು | : ದೂಳಪ್ಪ |
| ವಯಸ್ಸು | : 67 ವರ್ಷ |
| ಉದ್ಯೋಗ | : ನಿವೃತ್ತ ASI |
| ವಾಸಸ್ಥಳ | : ವಿಜಯಪುರ |

**ದಿನಾಂಕ:25-07-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದಃ</u>**

ನಾನು 2015 ದಿಂದ 2019 ರವರೆಗೆ ASI ಅಂತಾ ಚಡಚಣ ಪೋಲಿಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ26.11.2017 ರಂದು ಚಾಸಾ 10 ರವರಿಂದ ಪ್ರಕರಣದ ಕಡತವನಲ್ಲು ಪಡೆದುಕೊಂಡು ಪರಿಶೀಲನೆ ಮಾಡಿರುತ್ತೇನೆ. ದಿಃ17.07.2018 ರಂದು ರಾ.ಪ. ವರದಿಯನ್ನು ಪಡೆದುಕೊಂಡು ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ. ಸಾಕ್ಷಿಯು ಸದರಿ ರಾ.ಪ. ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ.3 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.3(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು: 2 ನೇ ಆರೋಪಿ ಪರ ಶ್ರೀ.ವಿ.ಎಸ್.ಸಿ. ವಕೀಲರಿಂದಃ</u>**

ಈ ಕೇಸಿನ ಬಗ್ಗೆ ನನಗೆ ಯಾವುದೇ ಮಾಹಿತಿ ಇರದೇ ಇದ್ದರು ಸಹ ಆರೋಪಿತನ ವಿರುದ್ದ ಒಂದು ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ: ಇಲ್ಲ.</u>**

<u>(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)</u>

**ಓ.ಹೆ.ಕೆ. ಸರಿ ಇದೆ**

ಸಹಿ/-

**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ.**

**ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ಸಿ.ಸಿ.ನಂ.1022/2018**

**ಸಿ.ಡಬ್ಲ್ಯೂ-10**

**ಪಿ.ಡಬ್ಲ್ಯೂ-03**

| | |
|---|---|
| ಸಾಕ್ಷಿಯ ಹೆಸರು | : ಎ.ಜಿ.ಪವಾರ |
| ತಂದೆ/ಗಂಡನ ಹೆಸರು | : ಗಂಗು |
| ವಯಸ್ಸು | : 68 ವರ್ಷ |
| ಉದ್ಯೋಗ | : ನಿವೃತ್ತ ಮುಖ್ಯ ಪೇದೆ |
| ವಾಸಸ್ಥಳ | : ಆಳೂರ |

**ದಿನಾಂಕ:25-07-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದಃ**

ನಾನು 2018 ರಿಂದ 5 ವರ್ಷಗಳ ಕಾಲ ಮುಖ್ಯ ಪೇದೆ ಅಂತಾ ಚಡಚಣ ಪೋಲಿಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ13.10.2017 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ 1 ರವರು ಠಾಣೆಗೆ ಹಾಜರಾಗಿ ಲಿಖಿತ ದೂರನ್ನು ನೀಡಿದ್ದು ಸದರಿ ದೂರಿನ ಸಾರಾಂಶದ ಮೇರೆಗೆ ಠಾಣಾ ಗುನ್ನಾ ನಂ.164/2017 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಪ್ರ.ವ.ವ.ವನ್ನು ಕಳುಹಿಸಿಕೊಟ್ಟಿರುತ್ತೇನೆ. ಆ ವೇಳೆಗೆ ಚಾಸಾ 1 ರವರು ಮುದ್ದೆಮಾಲು ಹಾಗೂ ಪಂಚನಾಮೆಯನ್ನು ನನ್ನ ಮುಂದೆ ಹಾಜರುಪಡಿಸಿರುತ್ತಾರೆ. ಆರೋಪಿಯನ್ನು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನದ ಕುರಿತು ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ಚಾಸಾ 4 ರಿಂದ 8 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಜಪ್ತಿಪಡಿಸಿಕೊಂಡ ಮುದ್ದೆಮಾಲುಗಳನ್ನು ರಾ.ಪ. ಕುರಿತು ನಮ್ಮ ಠಾಣಾ ಸಿಬ್ಬಂದಿಯವರ ಕಡೆಯಿಂದ ರಾ.ಪ್ರಯೋಗಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ಮುಂದಿನ ತನಿಖೆ ಕುರಿತು ಪ್ರಕರಣದ ಕಡತವನ್ನು ಚಾಸಾ 11 ರವರಿಗೆ ಹಸ್ತಾಂತರಿಸಿರುತ್ತೇನೆ. ಸಾಕ್ಷಿಯು ನಿ.ಪಿ.1 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿ.ಪಿ.1(ಬಿ) ಎಂದು, ಸಾಕ್ಷಿಯು ಪ್ರ.ವ.ವ.ವನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ.2 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.2(ಎ) ಎಂದು, ಸಾಕ್ಷಿಯು ಪ್ಲಾಸ್ಟಿಕ ಚೀಲವನ್ನು

ನೋಡಿ ಗುರುತಿಸಿದ್ದು ಅದನ್ನು ಮು.ಮಾ.2 ಎಂದು ಗುರುತಿಸಲಾಯಿತು. ಮು.ಮಾ.1 ನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು: 2 ನೇ ಆರೋಪಿ ಪರ ಶ್ರೀ.ವಿ.ಎಸ್.ಸಿ. ವಕೀಲರಿಂದಃ**

ಚಾಸಾ 1 ರವರು ನನ್ನ ಮೇಲಾಧಿಕಾರಿ ಇರುವುದರಿಂದ ಅವರು ನೀಡಿದ ಪಿರ್ಯಾದಿಯನ್ನು ನಾನು ನೋಡದೇ ಒಂದು ಸುಳ್ಳು ಪ್ರಕರಣವನ್ನು ದಾಖಲು ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ 1 ರವರು ನನಗೆ ಯಾವುದೇ ಮುದ್ದೆಮಾಲುಗಳನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಮು.ಮಾ.1 ಮತ್ತು 2 ರಂತೆ ಬೇರೆ ಕಡೆ ಸಿಗುತ್ತವೆ ಎಂದರೆ ಸರಿಯಲ್ಲ. ಮು.ಮಾ.2 ಕ್ಕೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿರುತ್ತದೆ. ನಾನು ನಮ್ಮ ಠಾಣಾ ಸಿಬ್ಬಂದಿ ಕಡೆಯಿಂದ ಜಪ್ತಿಪಡಿಸಿಕೊಂಡ ಮುದ್ದೆಮಾಲನ್ನು ರಾ.ಪ. ಕುರಿತು ಪ್ರಯೋಗಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯು ಮುಗ್ಧ ರೈತ ಇರುವುದರಿಂದ ಆತನು ಯಾವುದೇ ತಪ್ಪನ್ನು ಮಾಡದೇ ಇದ್ದರು ಸಹ ಆತನ ವಿರುದ್ಧ ಸುಳ್ಳು ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೆ.ಕೆ. ಸರಿ ಇದೆ**

ಸಹಿ/-

**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ.**